# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 351 |
| ಸದಸ್ಯರ ಹೆಸರು | : | ಶ್ರೀ ಶಶಿಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 07.07.2023. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಒಟ್ಟು ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ P.D.O ಗಳ ಸಂಖ್ಯೆ ಎಷ್ಟು; (ಪಂಚಾಯಿತಿಗಳವಾರು ವಿವರ ನೀಡುವುದು) | ರಾಜ್ಯದಲ್ಲಿ ಪ್ರಸ್ತುತ 5954 ಗ್ರಾಮ ಪಂಚಾಯತಿಗಳಿದ್ದು, ಅವುಗಳಲ್ಲಿ 5361 ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆ.<br><br>ಗ್ರಾಮ ಪಂಚಾಯತಿವಾರು ವಿವರವನ್ನು ಅನುಬಂಧ-1 ರಲ್ಲಿ ನೀಡಿದೆ. |
| (ಆ) | ಇಲಾಖೆಯಲ್ಲಿ ಮಂಜೂರಾಗಿರುವ ಹಾಗೂ ಖಾಲಿಯಿರುವ ಪಂಚಾಯತ್ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತ್ ಕಾರ್ಯದರ್ಶಿಗಳ ಹುದ್ದೆಗಳ ಸಂಖ್ಯೆ ಎಷ್ಟು; ಯಾವ ಕಾಲಮಿತಿಯಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು; (ವಿವರ ನೀಡುವುದು) | ಗ್ರಾಮ ಪಂಚಾಯತಿಗಳಿಗೆ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 / ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ವೃಂದದಲ್ಲಿ ಮಂಜೂರಾಗಿರುವ ವಿವರ, ಭರ್ತಿಯಾದ ಮತ್ತು ಖಾಲಿ ಇರುವ ಹುದ್ದೆಗಳ ವಿವರ ಈ ಕೆಳಕಂಡಂತಿದೆ. |

| ಕ್ರ ಸಂ | ವೃಂದ | ಮಂಜೂರಾದ ಹುದ್ದೆಗಳ ಸಂಖ್ಯೆ | ಭರ್ತಿಯಾದ ಹುದ್ದೆಗಳ ಸಂಖ್ಯೆ | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|---|---|
| 1 | ಪಂಚಾಯತಿ ಅಭಿವೃದ್ಧಿ ಅಧಿಕಾರಿ | 6021 | 5361 | 660 |
| 2 | ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-I | 2194 | 1590 | 604 |
| 3 | ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-II | 3827 | 3108 | 719 |

ನೇರ ನೇಮಕಾತಿ ಕೋಟಾದ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ 150 ಹುದ್ದೆಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ 135 ಹುದ್ದೆಗಳು, ಕಾರ್ಯದರ್ಶಿ ಗ್ರೇಡ್-2 ವೃಂದದ 343 ಹುದ್ದೆಗಳಿಗೆ ನೇರ ನೇಮಕಾತಿ ಮಾಡುವ ಪ್ರಕ್ರಿಯೆ ಪ್ರಗತಿಯಲ್ಲಿದೆ.

ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ಮುಂಬಡ್ತಿ ಕೋಟಾದ ಹುದ್ದೆಗಳಿಗೆ ಗ್ರಾಮ ಪಂಚಾಯತಿ

| | | |
|---|---|---|
| | | ಕಾರ್ಯದರ್ಶಿ ಗ್ರೇಡ್-1 ವೃಂದದ ಅರ್ಹ ನೌಕರರು ಲಭ್ಯವಾದಂತೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ಮೂಲಕ ಭರ್ತಿ ಮಾಡಲು ನಿರ್ದೇಶನ ನೀಡಲಾಗಿದೆ.<br><br>ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಮತ್ತು ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದಕ್ಕೆ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ (ಅಭಿವೃದ್ಧಿ) ರವರು ನೇಮಕಾತಿ ಪ್ರಾಧಿಕಾರ ಆಗಿದ್ದು, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದಕ್ಕೆ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ ಅರ್ಹ ನೌಕರರು ಲಭ್ಯವಾದಂತೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ಮೂಲಕ ಭರ್ತಿ ಮಾಡಲು ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 / ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದಕ್ಕೆ ಗ್ರಾಮ ಪಂಚಾಯತಿ ನೌಕರರಾದ ಬಿಲ್‌ಕಲೆಕ್ಟರ್ / ಕ್ಲರ್ಕ್ / ಅಕೌಂಟೆಂಟ್/ ಬೆರಳಚ್ಚುಗಾರ/ ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ವೃಂದದ ಅರ್ಹ ನೌಕರರು ಲಭ್ಯವಾದಂತೆ ಸೇವೆಯೊಳಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದಿಂದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. |
| (ಇ) | ರಾಜ್ಯದಲ್ಲಿ ಹಲವು ಜಿಲ್ಲೆಗಳಲ್ಲಿ ಒಬ್ಬ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗೆ ಎರಡಕ್ಕಿಂತ ಹೆಚ್ಚಿನ ಪಂಚಾಯಿತಿಗಳ ಜವಾಬ್ದಾರಿಯನ್ನು ವಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು; (ವಿವರ ನೀಡುವುದು) | ಬಂದಿದೆ.<br><br>ಸಾಮಾನ್ಯವಾಗಿ ಖಾಲಿ ಇರುವ ಗ್ರಾಮ ಪಂಚಾಯಿತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳಿಗೆ ಸಮೀಪದಲ್ಲಿರುವ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ/ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ನೌಕರರಿಗೆ ಅಧಿಕ ಪ್ರಭಾರ ವಹಿಸಲಾಗುವುದು. ಆದರೆ ಕೆಲವೊಂದು ಜಿಲ್ಲೆಗಳಲ್ಲಿ ಸಿಬ್ಬಂದಿಗಳ ಕೊರತೆಯಿಂದಾಗಿ ಎರಡಕ್ಕಿಂತ ಹೆಚ್ಚಿನ ಗ್ರಾಮ ಪಂಚಾಯತಿಗಳಿಗೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಅಧಿಕ ಪ್ರಭಾರದಲ್ಲಿರಿಸಿ, ಸಾರ್ವಜನಿಕ ಕೆಲಸ ಕಾರ್ಯಗಳಿಗೆ ಯಾವುದೇ ತೊಂದರೆಯಾಗದಂತೆ ಕ್ರಮ ವಹಿಸಲಾಗಿದೆ. |
| (ಈ) | ಕೆಲವು ಪಂಚಾಯತ್ ಅಧಿಕಾರಿಗಳು ಅನ್ಯ ಕಾರ್ಯಗಳಿಗೆ ನಿಯೋಜನೆ/OOD ಮೇಲೆ ಕಾರ್ಯನಿರ್ವಹಿಸುತ್ತಿರುವುದರಿಂದ ಗ್ರಾಮೀಣ ಮಟ್ಟದಲ್ಲಿ ಸರ್ಕಾರಿ ಯೋಜನೆಗಳನ್ನು ಜನಸಾಮಾನ್ಯರಿಗೆ ತಲುಪಿಸಲು ತೊಡಕುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ | ಬಂದಿದೆ.<br><br>ಅನಿವಾರ್ಯ ಸಂದರ್ಭದಲ್ಲಿ ಅವಶ್ಯಕತೆ ಆಧಾರದ ಮೇಲೆ ಬೇರೆ ಕಡೆಗೆ ನಿಯೋಜನೆ / ಅನ್ಯಕಾರ್ಯ ನಿಮಿತ್ತ (ಓಓಡಿ) ಆಧಾರದ ಮೇಲೆ ನೇಮಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ. |

| | | |
|---|---|---|
| | ಬಂದಿದೆಯೆ; ಹೌದಾದಲ್ಲಿ, ಅಧಿಕಾರಿಗಳನ್ನು ಸದರಿ ಇಲಾಖೆಗೆ ಹಿಂದಿರುಗಿಸುವ ಬಗ್ಗೆ ಸರ್ಕಾರದ ನಿಲುವೇನು; | |
| (ಉ) | ಪ್ರಸ್ತುತ ರಾಜ್ಯದಲ್ಲಿರುವ ಯಾವ-ಯಾವ ಪಂಚಾಯತ್ ಅಭಿವೃದ್ಧಿ (PDO), ಅಧಿಕಾರಿ ಹಾಗೂ ಪಂಚಾಯಿತಿ ಕಾರ್ಯದರ್ಶಿಗಳು ಅನ್ಯ ಕರ್ತವ್ಯ/ನಿಯೋಜನೆ/OOD ಮೇಲೆ ಯಾವ-ಯಾವ ಸ್ಥಳಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ? (ಸಂಪೂರ್ಣ ವಿವರ ನೀಡುವುದು) | ವಿವರಗಳನ್ನು ಅನುಬಂಧ-2 ಮತ್ತು ಅನುಬಂಧ-3 ರಲ್ಲಿ ನೀಡಿದೆ. |

ಸಂಖ್ಯೆ:RDPR 316 GPA 2023.

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.